## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** "ಗೃಹಲಕ್ಷ್ಮಿ ಯೋಜನೆ"ಗೆ ಸಂಬಂಧಿಸಿದಂತೆ "ಪ್ರಜಾ ಪ್ರತಿನಿಧಿ" (Citizen Volunteer)ಗಳನ್ನು ನೇಮಕ ಮಾಡಲು ಮಾರ್ಗಸೂಚಿಗಳನ್ನು ಹೊರಡಿಸುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಮಮಇ 70 ಮಮಲ 2023, ದಿನಾಂಕ: 20-05-2023.
2. ಸರ್ಕಾರದ ಆದೇಶ ಸಂಖ್ಯೆ: ಮಮಇ 70 ಮಮಅ 2023, ದಿನಾಂಕ: 06-06-2023.
3. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಏಕಕಡತ ಸಂಖ್ಯೆ: WCD/SS/7/2023.

**********

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಆದೇಶದಲ್ಲಿ ದಿನಾಂಕ: 20-05-2023ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ನೀಡಿದ ತಾತ್ವಿಕ ಅನುಮೋದನೆ ಮೇರೆಗೆ ಕರ್ನಾಟಕ ರಾಜ್ಯದ ಕುಟುಂಬದ ಯಜಮಾನಿ ಮಹಿಳೆಗೆ ಪ್ರತಿ ತಿಂಗಳು ರೂ. 2000/-ಗಳನ್ನು ನೀಡುವ 'ಗೃಹಲಕ್ಷ್ಮಿ ಯೋಜನೆ'ಯನ್ನು ಜಾರಿಗೆ ತರಲು ತಾತ್ವಿಕ ಅನುಮೋದನೆ ನೀಡಿ ಆದೇಶಿಸಲಾಗಿದೆ. ಹಾಗೂ ಈ ಯೋಜನೆಯ ವಿವರವಾದ ರೂಪುರೇಷೆ ಹಾಗೂ ಮಾರ್ಗಸೂಚಿಗಳನ್ನು ಪ್ರತ್ಯೇಕವಾಗಿ ಹೊರಡಿಸಲಾಗುವುದೆಂದು ತಿಳಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಆದೇಶದಲ್ಲಿ ರಾಜ್ಯದ ಕುಟುಂಬದಲ್ಲಿನ ಯಜಮಾನಿ ಮಹಿಳೆಗೆ ಪ್ರತಿ ತಿಂಗಳು ರೂ. 2000/-ಗಳನ್ನು ನೀಡುವ "ಗೃಹಲಕ್ಷ್ಮಿ" ಯೋಜನೆಯನ್ನು 2023-24ನೇ ಸಾಲಿನಲ್ಲಿ ಅನುಷ್ಠಾನಗೊಳಿಸಲು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಏಕಕಡತದಲ್ಲಿ ಗೃಹಲಕ್ಷ್ಮಿ ಯೋಜನೆಯ ಅರ್ಜಿದಾರರು ಗ್ರಾಮ ಒನ್, ಬೆಂಗಳೂರು ಒನ್ ಹಾಗೂ ಕರ್ನಾಟಕ ಒನ್‌ಗಳಲ್ಲಿ ಸೇವಾ ಸಿಂಧು ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿರುತ್ತದೆ. ಈ ಕೇಂದ್ರಗಳಲ್ಲಿ ಉಂಟಾಗಬಹುದಾಗ ಒತ್ತಡವನ್ನು ತಪ್ಪಿಸುವ ಸಲುವಾಗಿ Mobile App ಮೂಲಕವು ಸಹ ಅರ್ಜಿ ಸಲ್ಲಿಸುವ ಅವಕಾಶ ಕಲ್ಪಿಸಲು"ಪ್ರಜಾ ಪ್ರತಿನಿಧಿ" (Citizen Volunteer)ಗಳನ್ನು ನೇಮಕ ಮಾಡುವ ಕುರಿತು ದಿನಾಂಕ: 16-06-2023ರಂದು ಮಾನ್ಯ ಉಪ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ತಿಳಿಸಲಾಗಿರುತ್ತದೆ. ಅದರಂತೆ ದಿನಾಂಕ: 16-06-2023ರಂದು ನಡೆದ ಸಭೆಯ ನಡವಳಿಯಂತೆ "ಪ್ರಜಾ ಪ್ರತಿನಿಧಿ" (Citizen Volunteer)ಗಳ Application Develop ಮಾಡಲು ಇ-ಆಡಳಿತ ಇಲಾಖೆಯವರು Mail ಮೂಲಕ ಕೋರಿರುವ ವಿವರಗಳಂತೆ ಮಾರ್ಗಸೂಚಿಗಳನ್ನು ಹೊರಡಿಸುವಂತೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಮಮಇ 70 ಮಮಅ 2023 (ಭಾಗ-10),**
**ಬೆಂಗಳೂರು, ದಿನಾಂಕ:11-07-2023.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ 2023-24ನೇ ಸಾಲಿನಲ್ಲಿ ಗೃಹಲಕ್ಷ್ಮಿ ಯೋಜನೆಯಡಿ ಅರ್ಜಿದಾರರು Mobile App ಮೂಲಕವು ಸಹ ಅರ್ಜಿ ಸಲ್ಲಿಸುವ ಅವಕಾಶ

ಕಲ್ಪಿಸಲು ಇದರೊಂದಿಗೆ ಲಗತ್ತಿಸಿರುವ ಮಾರ್ಗಸೂಚಿಯನ್ವಯ "ಪ್ರಜಾ ಪ್ರತಿನಿಧಿ" (Citizen Volunteer) ಗಳನ್ನು ಗೌರವ ಸೇವೆ ಆಧಾರದ ಮೇಲೆ ನೇಮಕ ಮಾಡಲು ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರಿಗೆ ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

N.S. Khatawker
11/07/2023

**(ನಿರ್ಮಲಾ ಎಸ್. ಖಟಾವ್‌ಕರ್)**
ಸರ್ಕಾರದ ಅಧೀನ ಕಾರ್ಯದರ್ಶಿ-1,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ

**ಇವರಿಗೆ:**

1. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
2. ಸರ್ಕಾರದ ಕಾರ್ಯದರ್ಶಿ, ಇ-ಆಡಳಿತ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
3. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
4. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು,
5. ಎಲ್ಲಾ ಜಿಲ್ಲೆಯ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ.
6. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ 10), ವಿಧಾನಸೌಧ, ಬೆಂಗಳೂರು.
7. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು

**ಸರ್ಕಾರದ ಆದೇಶ ಸಂಖ್ಯೆ: ಮಮಇ 70 ಮಮಅ 2023 (ಭಾಗ-10), ದಿನಾಂಕ:11-07-2023ಕ್ಕೆ ಅನುಬಂಧ**

**ಗೃಹಲಕ್ಷ್ಮಿ ಯೋಜನೆಯಡಿ ಪ್ರಜಾ ಪ್ರತಿನಿಧಿ ನೇಮಕಾತಿ ಕುರಿತು ಮಾರ್ಗಸೂಚಿ:**

ಗೃಹಲಕ್ಷ್ಮಿ ಯೋಜನೆಗೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿರುವ ಗ್ರಾಮ ಒನ್, ಬೆಂಗಳೂರು ಒನ್, ಕರ್ನಾಟಕ ಒನ್ ಹಾಗೂ ಬಾಪೂಜಿ ಸೇವಾ ಕೇಂದ್ರಗಳಲ್ಲಿ ಉಂಟಾಗುವ ಒತ್ತಡವನ್ನು ತಪ್ಪಿಸಲು ಹಾಗೂ ಅರ್ಜಿದಾರರಿಗೆ ಅನುಕೂಲವಾಗುವಂತೆ Mobile App ಗಳ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸುವುದು. ಈ Mobile App ನ ಮೂಲಕ ಅರ್ಜಿ ಭರ್ತಿ ಮಾಡಿ ಸಲ್ಲಿಸಲು ಪ್ರಜಾ ಪ್ರತಿನಿಧಿಯವರನ್ನು ನೇಮಕ ಮಾಡುವುದು.

"ಪ್ರಜಾ ಪ್ರತಿನಿಧಿ"ರವರು ಗೃಹಲಕ್ಷ್ಮಿ ಯೋಜನೆಗೆ ಅರ್ಜಿ ಸಲ್ಲಿಸಲು ತಂತ್ರಜ್ಞಾನ ಅಡೆತಡೆಗಳನ್ನು ಎದುರಿಸುತ್ತಿರುವ ನಾಗರಿಕರಿಗೆ ಸಹಾಯ ಮಾಡುತ್ತಾರೆ. ಕರ್ನಾಟಕ ಸರ್ಕಾರವು ಅಭಿವೃದ್ಧಿ ಪಡಿಸಿದ ಮೊಬೈಲ್ ಅಪ್ಲಿಕೇಶನ್ ಅನ್ನು ಅವರು ನೋಂದಣಿಗಾಗಿ ಬಳಸುತ್ತಾರೆ. "ಪ್ರಜಾ ಪ್ರತಿನಿಧಿ"ರವರು ಉದ್ದೇಶಿತ ಫಲಾನುಭವಿಗಳ ಮನೆಗಳಿಗೆ ಭೇಟಿ ನೀಡುತ್ತಾರೆ ಮತ್ತು ನಾಗರಿಕರ ಪರವಾಗಿ ಅರ್ಜಿ ಸಲ್ಲಿಸುತ್ತಾರೆ . "ಪ್ರಜಾ ಪ್ರತಿನಿಧಿ"ರವರು ಈ ಸೇವೆಯನ್ನು ಸ್ವಯಂ ಪ್ರೇರಣೆಯಿಂದ ಮಾಡುತ್ತಿದ್ದು ಅವರಿಗೆ ಯಾವುದೇ ಶುಲ್ಕ ಪಾವತಿಸುವಂತಿಲ್ಲ.

ಪ್ರಜಾ ಪ್ರತಿನಿಧಿಗಳು ಆಯಾ ತಾಲ್ಲೂಕಿನ ನಿವಾಸಿಗಳಾಗಿದ್ದು, 10ನೇ ತರಗತಿ ಉತ್ತೀರ್ಣರಾಗಿರಬೇಕು ಹಾಗೂ ಗೃಹಲಕ್ಷ್ಮಿ ಯೋಜನೆಯಡಿ ಸ್ವಯಂ ಸೇವಕರಾಗಿ ಕೆಲಸ ನಿರ್ವಹಿಸಹಿಸಲು ಆಸಕ್ತಿಯುವುಳ್ಳವರಾಗಿರಬೇಕು.

**"ಪ್ರಜಾ ಪ್ರತಿನಿಧಿ"ರವರನ್ನು ಸೇವಾ ಸಿಂಧು ಪೋರ್ಟಲ್‌ನಲ್ಲಿ ನೋಂದಾಯಿಸಲಾಗುತ್ತದೆ. ನೋಂದಣಿ ಪ್ರಕ್ರಿಯೆಯು 3 ಹಂತಗಳನ್ನು ಒಳಗೊಂಡಿರುತ್ತದೆ:**

**a)"ಪ್ರಜಾ ಪ್ರತಿನಿಧಿ"ರವರ ಆಯ್ಕೆ:** ಜಿಲ್ಲಾ ಉಸ್ತುವಾರಿ ಸಚಿವರು ಜಿಲ್ಲೆಗೆ "ಪ್ರಜಾ ಪ್ರತಿನಿಧಿ" ಗಳನ್ನು ಆಯ್ಕೆ ಮಾಡುತ್ತಾರೆ. 1000 ಜನಸಂಖ್ಯೆಗಿಂತ ಕಡಿಮೆ ಅಥವಾ ಅದಕ್ಕೆ ಸಮನಾದ ಪ್ರತಿ ಗ್ರಾಮಕ್ಕೆ 2 "ಪ್ರಜಾ ಪ್ರತಿನಿಧಿ"ಗಳನ್ನು ಆಯ್ಕೆ ಮಾಡಲಾಗುತ್ತದೆ (ಕನಿಷ್ಠ ಒಂದು ಮಹಿಳಾ "ಪ್ರಜಾ ಪ್ರತಿನಿಧಿ"ರವರು ಇರತಕ್ಕದ್ದು). ಪ್ರತಿ ಹೆಚ್ಚುವರಿ 500 ಜನ ಸಂಖ್ಯೆಗೆ, ಒಂದು ಹೆಚ್ಚುವರಿ "ಪ್ರಜಾ ಪ್ರತಿನಿಧಿ"ಗಳನ್ನು ಆಯ್ಕೆ ಮಾಡಲಾಗುತ್ತದೆ. ಆಯ್ದ "ಪ್ರಜಾ ಪ್ರತಿನಿಧಿ"ಗಳ ಪಟ್ಟಿಯನ್ನು ಕೆಳಗೆ ನೀಡಲಾದ ಸ್ವರೂಪದಲ್ಲಿ ಒದಗಿಸಲಾಗುತ್ತದೆ. ನಗರ ಪ್ರದೇಶದಲ್ಲಿ ಜನಸಂಖ್ಯೆಗೆ ಅನುಗುಣವಾಗಿ ಪ್ರತಿ ವಾರ್ಡ್ ನಲ್ಲಿ 1000 ಜನಸಂಖ್ಯೆಗೆ ಇಬ್ಬರು ಪ್ರಜಾ ಪ್ರತಿನಿಧಿ"ಗಳನ್ನು ಆಯ್ಕೆ ಮಾಡಲಾಗುತ್ತದೆ (ಕನಿಷ್ಠ ಒಂದು ಮಹಿಳಾ "ಪ್ರಜಾ ಪ್ರತಿನಿಧಿ"ರವರು ಇರತಕ್ಕದ್ದು). ಪ್ರತಿ ಹೆಚ್ಚುವರಿ 500 ಜನ ಸಂಖ್ಯೆಗೆ, ಒಂದು ಹೆಚ್ಚುವರಿ "ಪ್ರಜಾ ಪ್ರತಿನಿಧಿ"ಗಳನ್ನು ಆಯ್ಕೆ ಮಾಡಲಾಗುತ್ತದೆ.

| ಜಿಲ್ಲೆ | ತಾಲ್ಲೂಕು | ಗ್ರಾಮ/ವಾರ್ಡ್ | ಹೆಸರು | ವಿದ್ಯಾರ್ಹತೆ | ಪಡಿತರಚೀಟಿಸಂಖ್ಯೆ | ಮೊಬೈಲ್ ಸಂಖ್ಯೆ |
|---|---|---|---|---|---|---|
| | | | | | | |

**ವಿದ್ಯಾರ್ಹತೆ ಮತ್ತು ಪಡಿತರ ಚೀಟಿ ಸಂಖ್ಯೆ ಸಂಬಂಧ ದಾಖಲಾತಿ ಒದಗಿಸುವುದು.**

**b) ಪ್ರಜಾ ಪ್ರತಿನಿಧಿ"ಗಳ ಡೇಟಾದ ಡಿಜಿಟಲೀಕರಣ:** ಆಯ್ಕೆಯಾದ "ಪ್ರಜಾ ಪ್ರತಿನಿಧಿ"ಗಳ ಪಟ್ಟಿಯನ್ನು ಜಿಲ್ಲಾಧಿಕಾರಿಗಳ ಕಚೇರಿಯಿಂದ ಡಿಜಿಟೈಸ್ ಮಾಡಲಾಗುತ್ತದೆ. ಪಡಿತರ ಚೀಟಿ ವಿವರಗಳನ್ನು ಪರಿಶೀಲಿಸುವ ಮೂಲಕ "ಪ್ರಜಾ ಪ್ರತಿನಿಧಿ"ಗಳು ನಿಯೋಜಿಸಲಾದ ಗ್ರಾಮಕ್ಕೆ/ವಾರ್ಡ್‌ಗಳ ಸೇರಿದ್ದಾರೆ ಎಂದು ಮತ್ತು ಮೊಬೈಲ್ ಸಂಖ್ಯೆಗಳು ಪುನರಾವರ್ತನೆಯಾಗಿರುವುದಿಲ್ಲ ಎಂದು ಜಿಲ್ಲಾಧಿಕಾರಿ ಕಚೇರಿಯು ಖಚಿತಪಡಿಸಿಕೊಳ್ಳಬೇಕು. ವಿದ್ಯಾರ್ಹತೆಯನ್ನು ಭೌತಿಕವಾಗಿ ಪರಿಶೀಲಿಸುವುದು. ಒದಗಿಸಿದ ಲಾಗಿನ್ ಅನ್ನು ಬಳಸಿಕೊಂಡು ಸೇವಾ ಸಿಂಧು ಪೋರ್ಟಲ್‌ಗೆ ವಿವರಗಳನ್ನು ಅಳವಡಿಸಲಾಗುವುದು. ಅಪ್ಲಿಕೇಶನ್ ಸಹ ಮೊಬೈಲ್ ಸಂಖ್ಯೆ ಮತ್ತು ಆರ್ ಸಿ ಸಂಖ್ಯೆಯನ್ನು ಡಿ-ಡಪ್ಲಿಕೇಟ್ ಮಾಡುತ್ತದೆ.

2...

<u>**c) ಬಳಕೆದಾರ ಗುರುತು (ID) ಮತ್ತು ಪಾಸ್‌ವರ್ಡ್‌ನ ದೃಢೀಕರಣ ಮತ್ತು ಸೃಜನೆ:**</u> ಪ್ರಜಾ ಪ್ರತಿನಿಧಿ"ಗಳ ಆಕೆಯ / ಆತನ ಮೊಬೈಲ್ ಸಂಖ್ಯೆಯನ್ನು ಬಳಸಿಕೊಂಡು ಸೇವಾ ಸಿಂಧು ಪೋರ್ಟಲ್‌ಗೆ ಲಾಗಿನ್ ಆಗಬೇಕು. ದೃಢೀಕರಣಕ್ಕಾಗಿ OTPಅನ್ನು ಮೊಬೈಲ್ ಸಂಖ್ಯೆಗೆ ಕಳುಹಿಸಲಾಗುತ್ತದೆ. ವಿವರಗಳನ್ನು (ಹೆಸರು, ಗ್ರಾಮ/ವಾರ್ಡ್ ನಿಯೋಜಿಸಲಾಗಿದೆ ಮತ್ತು ಪಡಿತರ ಚೀಟಿ ಸಂಖ್ಯೆ) ಪರಿಶೀಲಿಸಿದ ನಂತರ, ಆಧಾರ್ ಮೌಲ್ಯೀಕರಣದ ಮೂಲಕ (eKYCಯ OTP ಮೋಡ್) ಪ್ರಜಾ ಪ್ರತಿನಿಧಿ"ಗಳನ್ನು ದೃಢೀಕರಿಸಲಾಗುತ್ತದೆ. ಸಿಸ್ಟಮ್ ಡೇಟಾಬೇಸ್‌ನಲ್ಲಿನ ಹೆಸರಿನ ವಿರುದ್ಧ ಆಧಾರ್‌ನಲ್ಲಿರುವ ಹೆಸರನ್ನು ಹೊಂದಿಕೆಯಾಗತಕ್ಕದ್ದು (ಹೆಸರು ಹೊಂದಾಣಿಕೆಯ ಸ್ಕೋರ್ 40ಕ್ಕಿಂತ ಕಡಿಮೆ ಇರುವಲ್ಲಿ ಪಡಿತರ ಚೀಟಿಯಿಂದ ಸ್ವೀಕರಿಸಿದ ಹ್ಯಾಶ್ ವಿರುದ್ಧ ಹ್ಯಾಶ್ ಹೊಂದಾಣಿಕೆ ಮಾಡಲಾಗುತ್ತದೆ). ಯಶಸ್ವಿ ಹೊಂದಾಣಿಕೆಯಲ್ಲಿ, ಸಿಸ್ಟಮ್ ಬಳಕೆದಾರರ ರುಜುವಾತುಗಳನ್ನು ರಚಿಸುತ್ತದೆ. ಮೊಬೈಲ್ ಅಪ್ಲಿಕೇಶನ್ ಡೌನ್‌ಲೋಡ್ ಮಾಡಲು ಲಿಂಕ್ ಅನ್ನು ನೋಂದಾಯಿತ ಮೊಬೈಲ್ ಸಂಖ್ಯೆಗೆ SMS ಮೂಲಕ ಕಳುಹಿಸಲಾಗುತ್ತದೆ.

<u>**ಘೋಷಣೆ:**</u>

- ಆಯ್ಕೆಯಾದ ಸ್ವಯಂ ಸೇವಕರು ಕಡ್ಡಾಯವಾಗಿ Online ಮೂಲಕ **UNDERTAKING** (ಮಾದರಿ ಸ್ವಯಂ ಘೋಷಣೆ ಲಗತ್ತಿಸಿದೆ) ತೆಗೆದುಕೊಳ್ಳುವುದು. ಸದರಿ ಘೋಷಣೆಯಲ್ಲಿ ದತ್ತಾಂಶ ಗೌಪ್ಯತೆ, ದತ್ತಾಂಶ ಸುರಕ್ಷತೆ, ದತ್ತಾಂಶವನ್ನು ದುರುಪಯೋಗಪಡಿಸಿಕೊಳ್ಳುವುದಿಲ್ಲವೆಂದು, ಒಂದು ವೇಳೆ ದುರುಪಯೋಗಪಡಿಸಿಕೊಂಡಲ್ಲಿ ಅಥವಾ ಸುಳ್ಳು ಮಾಹಿತಿ ನೀಡಿ ನೇಮಕಗೊಂಡಿರುವುದು ಕಂಡುಬಂದಲ್ಲಿ ನಿಯಮಾನುಸಾರ ಕಾನೂನು ಕ್ರಮಕ್ಕೆ ಒಳಗಾಗಲು ಬದ್ಧನಾಗಿರುತ್ತೇನೆ ಎಂದು ಸ್ಪಷ್ಟಪಡಿಸಬೇಕು.

<u>**ಸ್ವಯಂ ಸೇವಕರ ಅವಧಿ**</u>:

- ಪ್ರಾಥಮಿಕವಾಗಿ ಪ್ರಜಾ ಪ್ರತಿನಿಧಿ ಗಳನ್ನು ಒಂದು ತಿಂಗಳ ಅವಧಿಗೆ ನೇಮಿಸಿಕೊಳ್ಳಬಹುದಾಗಿದೆ.

N.S. Khatawkar

**ಸರ್ಕಾರದ ಅಧೀನ ಕಾರ್ಯದರ್ಶಿ-1**
**ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ**
**ವಿಕಲಚೇತನರ ಹಾಗೂ ಹಿರಿಯ ನಾಗರಿಕರ**
**ಸಬಲೀಕರಣ ಇಲಾಖೆ**

**ಘೋಷಣೆ**

_______________ ಜಿಲ್ಲೆ, _____________ ತಾಲ್ಲೂಕು, _______________ ಗ್ರಾಮದ ಶ್ರೀ/ಶ್ರೀಮತಿ ____________________ ಇವರ ಮಗ/ಮಗಳು/ಹೆಂಡತಿ ______________ ಆದ ನಾನು ಗೃಹಲಕ್ಷ್ಮಿ ಯೋಜನೆಯಡಿ ಪ್ರಜಾ ಪ್ರತಿನಿಧಿ (Citizen Volunteer) ಯಾಗಿ Mopbile App ಮೂಲಕ ಗೃಹಲಕ್ಷ್ಮಿ ಅರ್ಜಿ ಸಲ್ಲಿಸಲು ಇಚ್ಛಿಸುವವರಿಗೆ ಸೇವೆ ಒದಗಿಸಲು ಸ್ವಯಂ ಪ್ರೇರಣೆಯಿಂದ ನೇಮಕಗೊಂಡಿರುತ್ತೇನೆ. ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ Mobile App ಜೊತೆ Share ಮಾಡಲಾಗುವ ದತ್ತಾಂಶದ ಗೋಪ್ಯತೆ, ದತ್ತಾಂಶ ಸುರಕ್ಷತೆಯನ್ನು ಕಾಪಾಡುವುದಾಗಿ ಹಾಗೂ ದತ್ತಾಂಶವನ್ನು ದುರುಪಯೋಗ ಪಡಿಸಿಕೊಳ್ಳುವುದಿಲ್ಲವೆಂದು ದೃಢೀಕರಿಸಿರುತ್ತೇನೆ. ದತ್ತಾಂಶ ದುರುಪಯೋಗಪಡಿಸಿಕೊಂಡಲ್ಲಿ ಅಥವಾ ಸುಳ್ಳು ಮಾಹಿತಿ ನೀಡಿ ನೇಮಕಗೊಂಡಿರುವುದು ಕಂಡುಬಂದಲ್ಲಿ ನಿಯಮಾನುಸಾರ ನನ್ನ ಮೇಲೆ ಕಾನೂನು ಕ್ರಮಕ್ಕೆ ಒಳಗಾಗಲು ಬದ್ಧನಾಗಿರುತ್ತೇನೆ.

ಸ್ಥಳ: ಹೆಸರು ಮತ್ತು ವಿಳಾಸ

ದಿನಾಂಕ: